**<u>1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.</u>**

**<u>ಕ್ರಿ.ಮೊ. ಸಂಖ್ಯೆ 1083/2025</u>**

<u>ಪಿರ್ಯಾದಿ</u> : ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

-ವಿರುದ್ದ-

<u>ಆರೋಪಿ/ತರು</u>: ಇಮ್ತಿಯಾಜ್ ಬಿನ್ ನೂರುಲ್ಲಾ

****

<u>ಆ ರೋ ಪ ಣೆ</u>

ದಿನಾಂಕ 11.02.2025 ರಂದು ಬೆಳಿಗ್ಗೆ 10.20 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೋಲೀಸ್ ಠಾಣಾ ಸರಹದ್ದಿನಲ್ಲಿ, ಗೋಪಾಲ ಗ್ರಾಮದ ಗೋಂಧಿ ಚಾನಲ್ ಬ್ರಿಡ್ಜ್ ಹತ್ತಿರ ತಿರುವು ರಸ್ತೆಯಲ್ಲಿ ಆರೋಪಿಯಾದ ನೀವು ಕೆಎ:45/1365 ನೊಂದಣಿ ಸಂಖ್ಯೆಯ ಲಾರಿಯಲ್ಲಿ ಗೊಬ್ಬರವನ್ನು ತುಂಬಿಕೊಂಡು ಚಾಸಾ-6 ಓಂಕಾರಪ್ಪ, ಚಾಸಾ-7 ರಮೇಶ ಮತ್ತು ಚಾಸಾ-8 ಮಧುರವರನ್ನು ಕೂರಿಸಿಕೊಂಡು ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಹೋದ ಪರಿಣಾಮ ರಸ್ತೆ ತಿರುವಿನಲ್ಲಿ ನಿಯಂತ್ರಣ ತಪ್ಪಿ ರಸ್ತೆಯ ಬದಿಯ ತಗ್ಗು ಪ್ರದೇಶಕ್ಕೆ ಲಾರಿ ಬಿದ್ದು ಅಪಘಾತವಾಗಿದ್ದು, ಆದ್ದರಿಂದ ಆರೋಪಿಯಾದ ನೀವು ಬಿ.ಎನ್.ಎಸ್. ಕಲಂ 281 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಕೆಎ:45/1365 ನೊಂದಣಿ ಸಂಖ್ಯೆಯ ಲಾರಿಯನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಮೇಲ್ಕಂಡಂತೆ ಅಪಘಾತ ಪಡಿಸಿದ ಪರಿಣಾಮ ಸದರಿ ಲಾರಿಯಲ್ಲಿದ್ದ ಚಾಸಾ-6 ರಿಂದ 8 ರವರಿಗೆ ಸಾಮಾನ್ಯ ಸ್ವರೂಪದ ಗಾಯಗಳಾಗಿದ್ದು, ಆದ್ದರಿಂದ ಆರೋಪಿಯಾದ ನೀವು ಬಿ.ಎನ್.ಎಸ್. ಕಲಂ 125(ಎ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಕೆಎ:45/1365 ನೊಂದಣಿ ಸಂಖ್ಯೆಯ ಲಾರಿಯನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಮೇಲ್ಕಂಡಂತೆ ಅಪಘಾತ ಪಡಿಸಿದ ಪರಿಣಾಮ ಸದರಿ ಲಾರಿಯಲ್ಲಿದ್ದ ಚಾಸಾ-6 ರಿಂದ 8 ರವರಿಗೆ ತೀವ್ರ ಸ್ವರೂಪದ ಗಾಯಗಳಾಗಿದ್ದು, ಆದ್ದರಿಂದ ಆರೋಪಿಯಾದ ನೀವು ಬಿ.ಎನ್.ಎಸ್. ಕಲಂ

125(ಬಿ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಪ್ರಶ್ನೆ 1) ಈಗ ಓದಿ ಹೇಳಲಾದ ಆರೋಪಣೆಯನ್ನು ಕೇಳಿ ತಿಳಿದುಕೊಂಡಿರಾ?
ಉತ್ತರಃ- ಹೌದು

ಪ್ರಶ್ನೆ 2) ನೀವು ಆರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆ?
ಉತ್ತರಃ- ಒಪ್ಪಿಕೊಳ್ಳುತ್ತೇನೆ

(ಮೇಲ್ಕಂಡ ಆಪಾದನೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ, ಕೇಳಿದ ನಂತರ ಆರೋಪಿ ಕೊಟ್ಟ ಉತ್ತರವನ್ನು ನಾನೇ ಯಥಾವತ್ತಾಗಿ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆಯೆಂದು ದೃಢೀಕರಿಸುತ್ತೇನೆ.)

ದಿನಾಂಕಃ 01.06.2026

ಸಹಿ
**(ಊರ್ಮಿಳ.ವಿ.)**
**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.